O.S.150/2019 PW-1

ದಿನಾಂಕಃ 16.02.2026 ರಂದು ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಿಂದಃ**

ದಾವಾ ಸ್ವತ್ತಿನ ಸೈಟ್ ನಂ. ಹಾಗೂ ಖಾತಾ ನಂ. ನನಗೆ ನೆನಪಿಲ್ಲ. ದಾವಾ ಸ್ವತ್ತಿನ ಚೆಕ್ಕು ಬಂಧಿ ನನಗೆ ಗೊತ್ತಿಲ್ಲ. ನಾನು ಸರ್ಕಾರದಿಂದ ಬಂದ ಜಮೀನನ್ನು ಮಾರಾಟ ಮಾಡಿದ್ದೇನೆ ಎಂದರೆ ಸರಿ. ಸರ್ಕಾರದಿಂದ ಮಂಜೂರಾದ ಜಮೀನನ್ನು ಹೊರೆತುಪಡಿಸಿ ನಮಗೆ ಬೇರೆ ಜಮೀನು ಇಲ್ಲ ಎಂದರೆ ಸರಿಯಲ್ಲ. ಸದರಿ ಜಮೀನಿಗೆ ಬಂಬಂಧಿಸಿದ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ನನಗೆ ಯಾವುದೇ ತೊಂದರೆ ಇಲ್ಲ ಎಂದರೆ ಸರಿ. ಪ್ರತಿವಾದಿಗಳು ದೊಡ್ಡಆಲದ ಮರ ಗ್ರಾಮದಲ್ಲಿ ಕ್ರಯಕ್ಕೆ ಪಡೆದ ನಿವೇಶನದಲ್ಲಿ ಮನೆ ಕಟ್ಟಿಕೊಂಡು ವಾಸವಿದ್ದಾರೆ ಎಂದರೆ ಸರಿ. ಉತ್ತರಕ್ಕೆ ಇರುವ ಗಲ್ಲಿಯ ಪಕ್ಕದಲ್ಲಿ ಪ್ರತಿವಾದಿಗಳ ಮನೆ ಇದೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ನಮಗೆ ಯಾವುದೇ ತೊಂದರೆಯನ್ನು ನೀಡಿಲ್ಲ ಎಂದರೆ ಸರಿಯಲ್ಲ. ದಾವಾ ಸ್ವತ್ತಿಗೆ ಸಂಬಂಧ ಪಟ್ಟಂತೆ ಯಾವುದೇ ದಾಖಲೆಗಳು ಇಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ದಾವೆಯನ್ನು ಹೂಡಿ ಸುಳ್ಳು ಸಾಕ್ಷಿ ನುಡಿಯುತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ.ಹೇ.ಕೇ.ಸರಿ.ಇದೆ.

ಸಹಿ/-

ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,
ಶಿರಾ.